ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/360/ಗ್ರಾಪಂಅ/2012

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:06-07-2012

**ಸುತ್ತೋಲೆ**

**ವಿಷಯ:** ಶಿಕ್ಷಣ ಹಕ್ಕು ಅಭಿಯಾನದಡಿಯಲ್ಲಿ ರಾಜ್ಯಾದ್ಯಂತ ಗ್ರಾಮ ಪಂಚಾಯತಿ ಕಟ್ಟಡಗಳ ಮೇಲೆ ಗೋಡೆಬರಹ ಬರೆಸುವ ಬಗ್ಗೆ.

ಶಿಕ್ಷಣ ಹಕ್ಕು ಕಾಯ್ದೆಯನ್ನು ಜಾರಿಗೊಳಿಸುವ ಹಿನ್ನೆಲೆಯಲ್ಲಿ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ವ್ಯಾಪಕ ಜಾಗೃತಿ ಮೂಡಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅದರಂತೆ ರಾಜ್ಯದ ಗ್ರಾಮ ಪಂಚಾಯತಿಗಳ ಗೋಡೆಗಳ ಮೇಲೆ ಶಿಕ್ಷಣ ಜಾಗೃತಿ ಬರಹಗಳನ್ನು ಬರೆಸಲು ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಪ್ರತಿ ಪಂಚಾಯತಿಗೆ ರೂ.300/- ರಂತೆ ಹಣ ಬಿಡುಗಡೆ ಮಾಡಲಾಗಿದೆ.

ಗ್ರಾಮ ಪಂಚಾಯತಿಗಳ ಗೋಡೆಗಳ ಮೇಲೆ ಶಿಕ್ಷಣ ಜಾಗೃತಿ ಬರಹಗಳನ್ನು ಬರೆದಿರುವ ಬಗ್ಗೆ ಎಲ್ಲಾ ತಾಲ್ಲೂಕು / ಜಿಲ್ಲಾ ಪಂಚಾಯತಿಗಳು ಪರಿಶೀಲಿಸಿ ದೃಢೀಕರಣ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.

(ಡಾ: ಶಾಲಿನಿ ರಜನೀಶ್)
ಸರ್ಕಾರದ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
2. ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು,
3. ಎಲ್ಲಾ ಗ್ರಾಮ ಪಂಚಾಯಿತಿ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ.ಪ. ಇಲಾಖೆ ರವರ ಆಪ್ತ ಕಾರ್ಯದರ್ಶಿ ರವರ ಮಾಹಿತಿಗಾಗಿ.